## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 356 |
| ಸದಸ್ಯರ ಹೆಸರು | : | ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15-12-2021. |
| ಉತ್ತರಿಸುವ ಸಚಿವರು | : | ಮಾನ್ಯ ಲೋಕೋಪಯೋಗಿ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಮಂಗಳೂರು-ಸೋಲ್ಲಾಪುರ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಯೋಜನೆಯು ಯಾವ ಹಂತದಲ್ಲಿದೆ; | ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಮಂಗಳೂರು - ಸೋಲಾಪುರ ಸೆಕ್ಷನ್‌ನಲ್ಲಿ ರಾಷ್ಟ್ರೀಯ ಹೆದ್ದಾರಿ -169 ರ ಕಾರ್ಕಳ - ಮಂಗಳೂರು (ಪ್ಯಾಕೇಜ್-III) ರ ಅಡಿ ಚತುಷ್ಪಥ ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. ಸದರಿ ಕಾಮಗಾರಿಯನ್ನು ಗುತ್ತಿಗೆದಾರರಾದ M/s Dilip Buildcon Limited ರವರಿಗೆ ದಿನಾಂಕಃ 26-03-2021 ರಂದು ವಹಿಸಲಾಗಿದೆ. ದಿನಾಂಕಃ10-09-2021 ರಂದು ಗುತ್ತಿಗೆ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದ್ದು, ನೇಮಕಾತಿ ದಿನಾಂಕವನ್ನು ನಿಗದಿಪಡಿಸಬೇಕಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಆ) | ದಕ್ಷಿಣ ಕನ್ನಡ, ಉಡುಪಿ, ಜಿಲ್ಲೆಗಳ ಮುಖಾಂತರ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಯೋಜನೆಯು ನಿಧಾನಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈ ಕಾಮಗಾರಿಯನ್ನು ತ್ವರಿತಗೊಳಿಸಲು ಕೈಗೊಂಡ ಕ್ರಮಗಳೇನು; | ಬಂದಿದೆ.<br>ಭೂಸ್ವಾಧೀನ ಪ್ರಕ್ರಿಯೆಯಲ್ಲಿ ನ್ಯಾಯಾಲಯ ಪ್ರಕರಣಗಳು ಒಳಗೊಂಡಿರುವುದರಿಂದ, ಕಾಮಗಾರಿಯು ನಿಧಾನಗತಿಯಲ್ಲಿ ಸಾಗುತ್ತಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. ಭೂಸ್ವಾಧೀನ ಸಮಸ್ಯೆಗಳನ್ನು ಬಗೆಹರಿಸುವ ಸಲುವಾಗಿ, ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ಮಾಸಿಕ ಪರಿಶೀಲನಾ ಸಭೆಯಲ್ಲಿ ಭೂಸ್ವಾಧೀನ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಇ) | ರಾಷ್ಟ್ರೀಯ ಹೆದ್ದಾರಿ ಯೋಜನೆಯಡಿ ಭೂಸ್ವಾಧೀನ ಪಡಿಸಿದ ಬಳಿಕ ಜಮೀನು ಕಳೆದುಕೂಂಡವರಿಗೆ ಪರಿಹಾರವನ್ನು ಒದಗಿಸಲಾಗಿದೆಯೇ? (ವಿವರ ನೀಡುವುದು) | ಹೌದು<br>ಸಣ್ಣೂರಿನಿಂದ ಬಿಕರ್ನಕಟ್ಟೆ ಕಾಮಗಾರಿಗೆ ಸಂಬಂಧಿಸಿದಂತೆ ದಿನಾಂಕಃ04-12-2021 ರಂತೆ ವಿಶೇಷ ಭೂಸ್ವಾಧೀನಾಧಿಕಾರಿ, ಮಂಗಳೂರು ಇವರ ವತಿಯಿಂದ ರೂ.109.23 ಕೋಟಿಗಳನ್ನು ವಿತರಿಸಲಾಗಿದೆ ಹಾಗೂ ಭೂಸ್ವಾದೀನಪಡಿಸಿದ ಬಳಿಕ ಜಮೀನು ಕಳೆದುಕೊಂಡವರಿಗೆ ಪರಿಹಾರ ವಿತರಣೆ ಪ್ರಗತಿಯಲ್ಲಿದೆಯೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 336 ಸಿಎನ್‌ಹೆಚ್ 2021 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು